## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಮಹಾವೀರ ದುಂಡಪ್ಪ ಹೆಗಡೆ, ಅಧ್ಯಕ್ಷರು, ಅಳಗವಾಡಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ ಇವರ ಪತ್ರ ಸಂಖ್ಯೆ: ಜಿಪಂಬೆ/ಪರಿಷತ್/ವಿವ/ನೇರ/2018-19, ದಿನಾಂಕ 05.05.2018 ಮತ್ತು 08.08.2018
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್, ದಿನಾಂಕ08.06.2018
3) ಶ್ರೀ ಮಹಾವೀರ ದುಂಡಪ್ಪ ಹೆಗಡೆ, ಅಧ್ಯಕ್ಷರು, ಅಳಗವಾಡಿ ಗ್ರಾಮ ಪಂಚಾಯತಿ ಇವರು ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 02.07.2018 ಮತ್ತು 21.07.2018
4) ಇದೇ ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ, ದಿನಾಂಕ 15.11.2018

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ, ದಿನಾಂಕ 26.10.2017 ರಂದು ಗ್ರಾಮ ಪಂಚಾಯತಿಗೆ ಬೀಗ ಹಾಕಿ, ಮರುದಿನ ಬೆಳಿಗ್ಗೆ ಕಛೇರಿ ಆವರಣದಲ್ಲಿ ರಾಷ್ಟ್ರಧ್ವಜ ಹಾರಿಸಲು ಅನುವು ಮಾಡಿಕೊಡದಿರುವುದು ಹಾಗೂ ದಿನಾಂಕ 19.06.2018ರ ಓಂಬುಡ್ಸ್‌ಮನ್ ಆದೇಶದನ್ವಯ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ದಾಖಲಾತಿ ಹಾಗೂ ಕೂಲಿಕಾರರ ಎನ್.ಎಂ.ಆರ್.ಗಳನ್ನು ಸಮರ್ಪಕವಾಗಿ ನಿರ್ವಹಿಸದೆ ರೂ.24,746/-ಗಳನ್ನು ದುರುಪಯೋಗಪಡಿಸಿಕೊಂಡಿರುವ ಹಿನ್ನೆಲೆಯಲ್ಲಿ ಇವರ ಸದಸ್ಯತ್ವ ತೆಗೆದುಹಾಕಲು ಬೆಳಗಾವಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 48(4) ಮತ್ತು 43(ಎ) ರನ್ವಯ ನಿಯಮಾನುಸಾರ ಸೂಕ್ತ ಕ್ರಮ ವಹಿಸುವಂತೆ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ ಜಿಲ್ಲೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಜರುಗಿಸಿ, ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಸದಸ್ಯ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬುದರ ಬಗ್ಗೆ ವಿವರಣೆ ನೀಡುವಂತೆ ಸದರಿ ಆಪಾದಿತ ಅಧ್ಯಕ್ಷರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಸದರಿ ಗ್ರಾಮ ಪಂಚಾಯತಿ ಅಧ್ಯಕ್ಷರು ಸರ್ಕಾರದಿಂದ ಜಾರಿಗೊಳಿಸಲಾಗಿದ್ದ ಕಾರಣ ಕೇಳಿ ನೋಟಿಸಿಗೆ ಕೆಳಗಿನಂತೆ ಉತ್ತರವನ್ನು ಸಲ್ಲಿಸಿರುತ್ತಾರೆ.

1) ದೂರುದಾರರು ರಾಜಕೀಯ ಕಾರಣಗಳಿಂದ ಮತ್ತು ನನ್ನ ಹೆಸರಿಗೆ ಕಳಂಕ ತರುವ ಉದ್ದೇಶದಿಂದ ಖೊಟ್ಟಿ ದೂರು ಸಲ್ಲಿಸಿರುತ್ತಾರೆ.

2) ನಾನು ಯಾವುದೇ ರೀತಿಯ ಕಾನೂನನ್ನು ಉಲ್ಲಂಘನೆ ಮಾಡಿರುವುದಿಲ್ಲ ಹಾಗೂ ರಾಷ್ಟ್ರ ಧ್ವಜಕ್ಕೆ ಅವಮಾನ ಮಾಡಿರುವುದಿಲ್ಲ. ಗ್ರಾಮ ಪಂಚಾಯತಿಯ ಬೀಗದ ಕೈ ಪಂಚಾಯತಿ ಸಿಬ್ಬಂದಿ ಕಡೆಗೆ ಇರುತ್ತದೆ. ಕಾರಣ ನಾನು ಪಂಚಾಯತಿ ಕಛೇರಿಗೆ ಬೀಗ ಹಾಕುವ ಪ್ರಶ್ನೆ ಉದ್ಭವಿಸುವುದಿಲ್ಲ.

3) ದೂರುದಾರರ ತೆಗೆದಿರುವ ಚಿತ್ರಗಳು ಕಛೇರಿಯ ಅವಧಿ ಮುಗಿದ ನಂತರ ಬೀಗ ಹಾಕಿರುವ ದೃಶ್ಯವನ್ನು ನೋಡಿ ಭಾವಚಿತ್ರ ತೆಗೆಯಲಾಗಿದೆ. ನಂತರ ಪತ್ರಿಕೆಗೆ ನೀಡಿ ಚಿತ್ರೀಕರಣ ಮಾಡಿದ ದೃಶ್ಯವನ್ನು ಟಿ.ವಿ.9ಗೆ ನೀಡಲಾಗಿದೆ. ದೂರುದಾರರ ವಿರುದ್ಧ ಸುಳ್ಳು ಆರೋಪ ಮಾಡಿ ಅವರೇ ರಾಷ್ಟ್ರ ಧ್ವಜಕ್ಕೆ ಅವಮಾನ ಮಾಡಿರುವ ಬಗ್ಗೆ ಸಂಬಂಧಪಟ್ಟ ಪೋಲಿಸ್‌ಠಾಣೆಗೆ ದೂರು ಸಲ್ಲಿಸಿರುತ್ತೇನೆ.

4) ಗ್ರಾಮ ಪಂಚಾಯತಿಯ ಎಲ್ಲಾ ವ್ಯವಹಾರಗಳು ಜೆಪಿಎಸ್ ಮುಖಾಂತರ ಆಗುತ್ತಿದ್ದು ಅಭಿಯಂತರರು ಪರಿಶೀಲನೆ ಮಾಡಿ ಬಿಲ್ ಬರೆಯಲು ಎಂಬಿ ಪುಸ್ತಕದಲ್ಲಿ ದಾಖಲಿಸಿದ ನಂತರ ಹಣ ಪಾವತಿ ಆಗುತ್ತದೆ. ಈ ಕುರಿತು ಸರ್ಕಾರಿ ಅಧಿಕಾರಿಗಳು ಜವಾಬ್ದಾರರಾಗಿರುತ್ತಾರೆ.

5) ಒಂದು ವೇಳೆ ಅವ್ಯವಹಾರವಾಗಿದ್ದರೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಅವಕಾಶ ಇರುತ್ತದೆ ಆದರೆ ಯಾವುದೇ ರೀತಿಯ ತನಿಖೆಯನ್ನು ಕೈಗೊಂಡಿರುವುದಿಲ್ಲ.

6) ರಾಜಕೀಯ ಕಾರಣಗಳಿಂದ ಇಲ್ಲಸಲ್ಲದ ಆರೋಗಳನ್ನು ಮಾಡಿದ್ದು ದೂರಿನಲ್ಲಿರುವ ವಿಷಯಗಳು ಸುಳ್ಳಿನಿಂದ ಕೂಡಿದ್ದು ಪ್ರಕರಣವನ್ನು ನ್ಯಾಯದ ಹಿತದೃಷ್ಟಿಯಿಂದ ವಿಲೇ ಮಾಡಲು ವಿನಂತಿಸಿರುತ್ತಾರೆ.

ದಿನಾಂಕ 11.10.2018 ಮತ್ತು 04.12.2018ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ಜರುಗಿಸಲಾಗಿದೆ. ಆಪಾದಿತ ರಾಯಭಾಗ ತಾಲ್ಲೂಕಿನ ಅಳಗವಾಡಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀ ಮಹಾವೀರ ದುಂಡಪ್ಪ ಹೆಗಡೆ, ರಾಯಭಾಗ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಅಳಗವಾಡಿ ಗ್ರಾಮ ಪಂಚಾಯತಿಯ ಅಂದಿನ ಹಾಗೂ ಹಾಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಜರಾಗಿರುತ್ತಾರೆ. ಸರ್ಕಾರದಿಂದ ಕಾರಣ ಕೇಳಿ ನೋಟೀಸಿಗೆ ಆಪಾದಿತರು ಲಿಖಿತ ಹೇಳಿಕೆ ಸಲ್ಲಿಸಿದ್ದು, ರಾಜಕೀಯ ಕಾರಣಗಳಿಂದ ಮತ್ತು ಹೆಸರಿಗೆ ಕಳಂಕ ತರುವ ಉದ್ದೇಶದಿಂದ ಖೊಟ್ಟಿ ದೂರು ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ. ಹಾಗೂ ವಿಚಾರಣೆ ಸಂದರ್ಭದಲ್ಲಿ ಆರೋಪಗಳನ್ನು ಅಲ್ಲಗಳೆದಿದ್ದು, ಬೆಳಗಾವಿ ಜಿಲ್ಲಾ ಪಂಚಾಯತಿ ಓಂಬುಡ್ಸ್‌ಮನ್ ಆದೇಶದ ವಿರುದ್ಧ ಓಂಬುಡ್ಸ್‌ಮನ್ ಮೇಲ್ಮನವಿ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲಾಗಿ, ದಿನಾಂಕ 15.11.2018ರಂದು ಬೆಳಗಾವಿ ಜಿಲ್ಲಾ ಪಂಚಾಯತಿಯ ಓಂಬುಡ್ಸ್‌ಮನ್‌ರವರ ಈ ಆದೇಶವನ್ನು ರದ್ದುಗೊಳಿಸಿ ಆದೇಶಿಸಿರುತ್ತಾರೆ ಎಂದು ತಿಳಿಸಿರುತ್ತಾರೆ. ಪರಿಶೀಲಿಸಲಾಗಿ, ಬೆಳಗಾವಿ ಜಿಲ್ಲಾ ಪಂಚಾಯತಿಯ ಓಂಬುಡ್ಸ್‌ಮನ್‌ರವರ ಆದೇಶವನ್ನು ಓಂಬುಡ್ಸ್‌ಮನ್ ಮೇಲ್ಮನವಿ ಪ್ರಾಧಿಕಾರ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರು ರದ್ದುಗೊಳಿಸಿದ್ದು, ಆರೋಪಗಳು ಸಾಬೀತಾಗದೆ ಇರುವ ಹಿನ್ನೆಲೆಯಲ್ಲಿ, ಈ ರೀತಿ ಪ್ರಕರಣಗಳು ಮರುಕಳಿಸದಂತೆ ರಾಯಭಾಗ ತಾಲ್ಲೂಕಿನ ಅಳಗವಾಡಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀ ಮಹಾವೀರ ದುಂಡಪ್ಪ ಹೆಗಡೆ ಇವರಿಗೆ ಎಚ್ಚರಿಕೆ ನೀಡಲು ವಿಚಾರಣಾ ನಂತರ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ನಿರ್ಣಯಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ, ಶ್ರೀ ಮಹಾವೀರ ದುಂಡಪ್ಪ ಹೆಗಡೆ, ಅಧ್ಯಕ್ಷರು, ಅಳಗವಾಡಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರಿಗೆ ಇನ್ನು ಮುಂದೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ನೀಡಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) ಮತ್ತು 43(ಎ) ರನ್ವಯ ಪ್ರಾರಂಭಿಸಲಾದ ಕ್ರಮವನ್ನು ಕೈಬಿಡಲು ನಿರ್ಣಯಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 488 ಗ್ರಾಪಂಅ 2018 ಬೆಂಗಳೂರು, ದಿನಾಂಕ: 08.03.2018**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಮಹಾವೀರ ದುಂಡಪ್ಪ ಹೆಗಡೆ, ಅಧ್ಯಕ್ಷರು, ಅಳಗವಾಡಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರಿಗೆ ಇನ್ನು ಮುಂದೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ನೀಡಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4) ರನ್ವಯ ಪ್ರಾರಂಭಿಸಲಾದ ಕ್ರಮವನ್ನು ಕೈಬಿಟ್ಟು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/3

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

1) ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ ಅಗತ್ಯ ಕ್ರಮಕ್ಕಾಗಿ.
3) ಕಾರ್ಯನಿರ್ವಾಹಕ ಅಧಿಕಾರಿ, ರಾಯಭಾಗ ತಾಲ್ಲೂಕು ಪಂಚಾಯತಿ, ರಾಯಭಾಗ, ಬೆಳಗಾವಿ ಜಿಲ್ಲೆ. (ಸಂಬಂಧಪಟ್ಟವರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ,ಸ್ವೀಕೃತಿಯನ್ನು ಸರ್ಕಾರಕ್ಕೆ ಕಳುಹಿಸಲು ತಿಳಿಸಿದೆ)
4) ಶ್ರೀ ಮಹಾವೀರ ದುಂಡಪ್ಪ ಹೆಗಡೆ, ಅಧ್ಯಕ್ಷರು, ಅಳಗವಾಡಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅಳಗವಾಡಿ ಗ್ರಾಮ ಪಂಚಾಯತಿ, ರಾಯಭಾಗ ತಾ., ಬೆಳಗಾವಿ ಜಿಲ್ಲೆ
6) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.